ಎಲ್.ಎ.ಸಿ.ನಂ.762/2021
ಪಿ.ಡಬ್ಲ್ಯೂ: 01

<u>ಸಾಕ್ಷಿಯನ್ನು ಇಂದು ದಿ**. 17-03-2023** ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು</u>

<u>ಪಾಟೀ ಸವಾಲು: ಶ್ರೀ.ಬಿ.ಬಿ.ವಾಯ್., ವಿಶೇಷ ಸರಕಾರಿ ವಕೀಲರಿಂದ ಎದುರುದಾರರ ಪರವಾಗಿ:</u>

1) ನನ್ನದು ಒಟ್ಟು 6 ಎಕರೆ 24 ಗುಂಟೆ ಜಮೀನು ಇದ್ದು, ಅದರಲ್ಲಿ 24 ಗುಂಟೆ ಜಮೀನು ಸ್ವಾಧೀನಗೊಂಡಿದ್ದು, ಅದರಲ್ಲಿ 1 ಗುಂಟೆ ಪೋಟ ಖರಾಬ ಇರುತ್ತದೆ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಬರೆದ ಸಂಗತಿಗಳು ಮತ್ತು ನಾನು ನ್ಯಾಯಾಲಯದಲ್ಲಿ ಹಾಜರುಪಡಿಸಿದ ದಾಖಲೆಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ನನ್ನ ಜಮೀನು ಸ್ವಾಧೀನಪಡಿಸಿಕೊಳ್ಳುವ ಪೂರ್ವದಲ್ಲಿ ನನಗೆ ನೋಟಿಸನ್ನು ನೀಡಿರುತ್ತಾರೆ ಎಂದರೆ ಸರಿ. ನೋಟಿಸ ಜಾರಿ ಮಾಡಿದ ನಂತರ ಅಧಿಕಾರಿಗಳು ಬಂದು ಜಂಟಿ ಸರ್ವೆ ಮಾಡಿರುತ್ತಾರೆ ಎಂದರೆ ಸರಿ. ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ದಿಂಡವಾರ ಗ್ರಾಮಕ್ಕೆ ನಿಗದಿಮಾಡಿದ ಯೋಗ್ಯ ಬೆಲೆಯನ್ನು ನಮಗೆ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ.

2) ಹೆಚ್ಚಿನ ಪರಿಹಾರ ಕೋರಿ ಅರ್ಜಿಯನ್ನು ಸಲ್ಲಿಸಿದ ದಿನಾಂಕ ನೆನಪಿಲ್ಲ. ಅರ್ಜಿಯನ್ನು ನಾನು ಸರಿಯಾದ ಸಮಯದಲ್ಲಿ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ನನ್ನ ಜಮೀನು ಸಂಪೂರ್ಣ ಒಣಬೇಸಾಯದ ಜಮೀನು ಎಂದರೆ ಸರಿ. ಎರೆ ಜಮೀನು ಹಾಗೂ ಮರಡಿ ಜಮೀನು ಕಿಮ್ಮತ್ತು ಬೇರೆ ಬೇರೆ ಇರುತ್ತವೆ ಎಂದರೆ ಸರಿ. ಭೂಮಿಯ ಫಲವತ್ತತೆ ಒಂದು ಜಮೀನದಿಂದ ಇನ್ನೊಂದು ಜಮೀನಕ್ಕೆ ಬೇರೆ ಬೇರೆ ಇರುತ್ತದೆ ಎಂದರೆ ಸರಿ.

3) ನಿ.ಪಿ.2 ರಿಂದ 7 ಕು.ಸಾಲವಡಗಿ ಗ್ರಾಮದ ಖರೀದಿ ಪತ್ರಗಳು ಇದ್ದು, ಸದರಿ ಖರೀದಿ ಪತ್ರಗಳು ಯಾರಿಗೆ ಸಂಬಂಧಪಟ್ಟಿದ್ದು, ಯಾವ ಉದ್ದೇಶಕ್ಕೆ ಖರೀದಿ ಆಗಿರುತ್ತದೆ, ಎಷ್ಟು ಬೆಲೆಗೆ ಖರೀದಿಸಿರುತ್ತಾರೆ ಮತ್ತು ಸರ್ವೆ ನಂಬರ ಹೇಳಲು ಬರುವುದಿಲ್ಲ. ಖರೀದಿ ಪತ್ರದ ಜಮೀನಿಗೂ ಮತ್ತು ನನ್ನ ಜಮೀನಿಗೂ ಕನಿಷ್ಠ 15 ಕಿ.ಮೀ ಅಂತರ ಇದೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು 3-4 ಕಿ.ಮೀ ಅಂತರ ಇದೆ ಎಂದು ಸ್ವತಃ ಹೇಳುತ್ತಾರೆ. ದಿಂಡವಾರ ನಂತರ ಕಾಮನಕೇರಿ, ನಂತರ ಬೂದಿಹಾಳ, ನಂತರ ಕು.ಸಾಲವಡಗಿ ಗ್ರಾಮದ ಜಮೀನುಗಳು ಬರುತ್ತವೆ ಎಂದರೆ ಸರಿ. ನಿ.ಪಿ.2 ರಿಂದ 5 ಖರೀದಿ ಪತ್ರಗಳನ್ನು ವಾಣಿಜ್ಯ ಉದ್ದೇಶಕ್ಕಾಗಿ ಖರೀದಿಸಿರುತ್ತಾರೆ ಎಂದರೆ ಸರಿ. ನನ್ನ ಜಮೀನಿಗೂ ಖರೀದಿ ಪತ್ರದ ಜಮೀನುಗಳಿಗೂ ಎಷ್ಟು ಅಂತರ ಇದೆ ಎಂದು ತೋರಿಸಲು ಯಾವುದೇ ದಾಖಲೆ ಹಾಜರುಪಡಿಸಿಲ್ಲ. ನನ್ನ ಸಾಕ್ಷ್ಯ ಪ್ರಮಾಣ ಪತ್ರದ ಪ್ಯಾರಾ ನಂ.7 ರಲ್ಲಿ ಹೇಳಿರುವ ಸಂಗತಿಗಳನ್ನು ಸಾಬೀತುಪಡಿಸಲು ಎ.ಪಿ.ಎಮ್.ಸಿಯಿಂದಾಗಲಿ ಅಥವಾ ಬೇರೆ ಯಾವುದೇ ದಾಖಲೆ ಹಾಜರುಪಡಿಸಿಲ್ಲ.

ಎಲ್.ಎ.ಸಿ.ನಂ.762/2021
ಪಿ.ಡಬ್ಲ್ಯೂ: 01

4) ನಾನು ಒಂದು ಎಕರೆಗೆ 80 ಲಕ್ಷ ಪರಿಹಾರ ಕೇಳಿದ್ದು, ಅದಕ್ಕೆ ಸೂಕ್ತ ದಾಖಲೆಗಳು ಇರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಜಮೀನಿಗೆ ಸರ್ಕಾರ ಸೂಕ್ತವಾದ ಬೆಲೆ ಕೊಟ್ಟಿದ್ದರು ಸಹ ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ: ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ. ಸರಿ ಅದೆ.

3 ನೇ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರು,
ವಿಜಯಪುರ.